## 7. ಕನ್ನಡ ನಿರ್ಲಕ್ಷಿಸುವ ಶಾಲೆಗಳ ವಿರುದ್ಧ ಕ್ರಮ

ಕಡ್ಡಾಯ ಕನ್ನಡ ಕಲಿಕಾ ವಿಧೇಯಕ-2015ರ ಅನುಷ್ಠಾನಕ್ಕೆ ಅನಾದರ ಇಲ್ಲವೇ ನಿರ್ಲಕ್ಷ್ಯ ತೋರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಸಚಿವ ಎಸ್. ಸುರೇಶ್‌ಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಶ್ರಯದಲ್ಲಿ ಕಡ್ಡಾಯ ಕನ್ನಡ ಕಲಿಕಾ ವಿಧೇಯಕ-2015ರ ಅನುಷ್ಠಾನದ ಪರಾಮರ್ಶೆ ಕುರಿತು ರಾಜ್ಯದ ಎಲ್ಲ ಡಿಡಿಪಿಐಗಳೊಂದಿಗೆ ನಡೆದ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಇದಕ್ಕಾಗಿ 2015ರಲ್ಲಿ ಜಾರಿಗೆ ತರಲಾದ ಕನ್ನಡ ಕಲಿಕಾ ಕಾಯ್ದೆಯ ಕಟ್ಟುನಿಟ್ಟಿನ ಅನುಷ್ಠಾನಕ್ಕೆ ಶಿಕ್ಷಣ ಇಲಾಖೆ ಕಟಿಬದ್ಧವಾಗಿದೆ ಎಂದು ಹೇಳಿದರು.

ಈ ನೆಲದ ಕಾನೂನು ಅನುಷ್ಠಾನದ ವಿಷಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಶಿಕ್ಷಣ ಇಲಾಖೆಯೊಂದಿಗೆ ನಿರ್ವಹಿಸುತ್ತಿರುವ ಸಮನ್ವಯ ಜವಾಬ್ದಾರಿ ನಿಜಕ್ಕೂ ಪ್ರೇರಣಾದಾಯಕ ಸಂಗತಿಯಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರಗಳು ಜೋಡೆತ್ತಿನಂತೆ ಕೆಲಸ ಮಾಡಲಿದೆ. ಕನ್ನಡ ನೆಲದಲ್ಲಿ ಓದುವ ಪ್ರತಿಯೊಂದು ಮಗುವೂ ಕನ್ನಡವನ್ನು ಕಲಿಯಬೇಕು. ಅರ್ಹ ಶಿಕ್ಷಕರು ಈ ಮಕ್ಕಳಿಗೆ ಕನ್ನಡ ಕಲಿಸಬೇಕು. ಇದನ್ನು ರಾಜ್ಯದ ಎಲ್ಲ ಖಾಸಗಿ ಶಿಕ್ಷಣ ಸಂಸ್ಥೆಗಳು ಅರ್ಥೈಸಿಕೊಂಡು ಮಕ್ಕಳ ಹಿತದೃಷ್ಟಿಯಿಂದ ಸರ್ಕಾರದ ಈ ಕ್ರಮವನ್ನು ಬೆಂಬಲಿಸಬೇಕೆಂದರು.

ಜಾಗತಿಕ ನಿರೀಕ್ಷೆಗೆ ತಕ್ಕಂತೆ ನಮ್ಮ ಸರ್ಕಾರಿ ಶಾಲೆ ಮಕ್ಕಳನ್ನು ತಯಾರು ಮಾಡಬೇಕು ಮತ್ತು ನಮ್ಮ ಸರ್ಕಾರಿ ಶಾಲೆಗಳನ್ನು ಸಬಲೀಕರಣಗೊಳಿಸಿ ಉಳಿಸಿ ಬೆಳೆಸುವ ಮಹೋನ್ನತ ಉದ್ದೇಶದಿಂದ ಈ ವರ್ಷದಿಂದಲೇ ರಾಜ್ಯದಲ್ಲಿ 1000 'ಉಭಯ ಮಾಧ್ಯಮ ಶಾಲೆ'ಗಳನ್ನು ಆರಂಭಿಸಲಾಗುವುದೆಂದರು.

ಸರ್ಕಾರಿ ಶಾಲೆಗಳನ್ನು ಸಬಲೀಕರಣಗೊಳಿಸುವಂತಹ ಇಂತಹ ಉಪಕ್ರಮಕ್ಕೆ ಸಾರ್ವಜನಿಕರ ಬೆಂಬಲ ಮತ್ತು ಸಹಕಾರ ಅಗತ್ಯವಿದೆ ಎಂದರು.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:06.06.2020